ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2015–16 ದಿನಾಂಕ: 11–11–2015

# ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ / ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | ಪತ್ರಿಕಾಗೋಷ್ಠಿ:<br>ಶ್ರೀ ಕಾಗೋಡು ತಿಮ್ಮಪ್ಪ ಕರ್ನಾಟಕ ವಿಧಾನಸಭಾ ಅಧ್ಯಕ್ಷರು, ಬೆಂಗಳೂರು | 13–11–2015<br>ಶುಕ್ರವಾರ<br>ಬೆಳಿಗ್ಗೆ<br>11–30 ಗಂಟೆಗೆ | ಕೊಠಡಿ ಸಂಖ್ಯೆ 106,<br>ಮೊದಲನೇ ಮಹಡಿ,<br>ವಿಧಾನಸೌಧ, ಬೆಂಗಳೂರು |
| 2. | ಪತ್ರಿಕಾಗೋಷ್ಠಿ:<br>ಶ್ರೀ ಡಿ.ಹೆಚ್. ಶಂಕರಮೂರ್ತಿ ಕರ್ನಾಟಕ ವಿಧಾನಪರಿಷತ್ ಸಭಾಪತಿಗಳು , ಬೆಂಗಳೂರು | 13–11–2015<br>ಶುಕ್ರವಾರ<br>ಬೆಳಿಗ್ಗೆ<br>12–30 ಗಂಟೆಗೆ | ಸಭಾಪತಿಗಳ ಕೊಠಡಿ ಸಂಖ್ಯೆ 117,<br>ಮೊದಲನೇ ಮಹಡಿ,<br>ವಿಧಾನಸೌಧ, ಬೆಂಗಳೂರು |

ನಿರ್ದೇಶಕರ ಪರವಾಗಿ

# ನೆಹರು ಭಾವಚಿತ್ರಕ್ಕೆ ಮಾಲಾರ್ಪಣೆ

ಬೆಂಗಳೂರು, ನವೆಂಬರ್ 11 (ಕರ್ನಾಟಕ ವಾರ್ತೆ)

ಮಾಜಿ ಪ್ರಧಾನ ಮಂತ್ರಿ ದಿವಂಗತ ಪಂಡಿತ್ ಜವಾಹರ್‌ಲಾಲ್ ನೆಹರು ಅವರ 126 ನೇ ಜನ್ಮ ದಿನಾಚರಣೆಯ ಅಂಗವಾಗಿ ನವೆಂಬರ್ 14 ರಂದು ಬೆಳಿಗ್ಗೆ 10.00 ಗಂಟೆಗೆ ವಿಧಾನಸೌಧದ ಪಶ್ಚಿಮ ದಿಕ್ಕಿನಲ್ಲಿರುವ ಅವರ ಪ್ರತಿಮೆ ಬಳಿ ಅವರ ಭಾವಚಿತ್ರಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಾಲಾರ್ಪಣೆ ಮಾಡುವರು.

ಬಾಬು:ಜಿಪಿಆರ್.

# ಆಕ್ಷೇಪಣೆ ಇದ್ದರೆ ಸಲ್ಲಿಸಿ

ಬೆಂಗಳೂರು, ನವೆಂಬರ್ 11 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯದ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಲ್ಲಿನ ದೈಹಿಕ ಶಿಕ್ಷಕರು ಹಾಗೂ ಪ್ರಥಮ ದರ್ಜೆ ಗಣಕಯಂತ್ರ ಸಹಾಯಕರು ಮತ್ತು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿನ ದಂತ ಆರೋಗ್ಯಾಧಿಕಾರಿ ಹಾಗೂ ಸೈಕಿಯಾಟ್ರಿ ಹುದ್ದೆಗಳ ತಾತ್ಕಾಲಿಕ ಆಯ್ಕೆಪಟ್ಟಿಗಳನ್ನು ನವೆಂಬರ್ 09 ರಂದು ಆಯೋಗದ ಅಂತರ್ಜಾಲ http://kpsc.kar.nic.in/Section List Provisional Selection List ರಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಿದೆ.

ಈ ತಾತ್ಕಾಲಿಕ ಪಟ್ಟಿಗಳಿಗೆ ಆಕ್ಷೇಪಣೆಗಳನ್ನು ಸಲ್ಲಿಸಲು ಇಚ್ಛಿಸುವ ಅಭ್ಯರ್ಥಿಗಳು ನಿಗದಿತ ಅವಧಿಯೊಳಗೆ ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗಸೌಧ, ಬೆಂಗಳೂರು – 560 001 ಇವರಿಗೆ ಸಲ್ಲಿಸಬಹುದು. ನಿಗದಿತ ದಿನಾಂಕದ ನಂತರ ಸ್ವೀಕೃತವಾಗುವ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

ಬಾಬು:ಜಿಪಿಆರ್.

## ಚಲನಚಿತ್ರ ನಟ ದೊಡ್ಡಣ್ಣ ಅವರೊಂದಿಗೆ ಬೆಳ್ಳಿಹೆಜ್ಜೆ

**ಬೆಂಗಳೂರು, ನವೆಂಬರ್ 11 (ಕರ್ನಾಟಕ ವಾರ್ತೆ)**

**ಕರ್ನಾಟಕ ಚಲನಚಿತ್ರ ಅಕಾಡೆಮಿಯು ಕನ್ನಡ ಚಿತ್ರರಂಗದ ಹಿರಿಯ ನಟ ದೊಡ್ಡಣ್ಣ ಅವರೊಂದಿಗೆ ನವೆಂಬರ್ 14 ರಂದು ಸಂಜೆ 5-00 ಗಂಟೆಗೆ ಬೆಂಗಳೂರು ಕುಮಾರಪಾರ್ಕ್ ರಸ್ತೆಯ ಮಹದೇವ ದೇಸಾಯಿ ಸಭಾಂಗಣದಲ್ಲಿ "ಬೆಳ್ಳಿಹೆಜ್ಜೆ" ಕಾರ್ಯಕ್ರಮವನ್ನು ಏರ್ಪಡಿಸಿದೆ ಎಂದು ಅಕಾಡೆಮಿಯ ರಿಜಿಸ್ಟ್ರಾರ್ ಹೆಚ್. ಬಿ. ದಿನೇಶ್ ಅವರು ತಿಳಿಸಿದ್ದಾರೆ.**

**ಸಮಾರಂಭದ ಮುಖ್ಯ ಅತಿಥಿಗಳಾಗಿ ಕನ್ನಡ ಚಲನಚಿತ್ರ ನಟಿ ಹಾಗೂ ಕನ್ನಡ ಮತ್ತು ಸಂಸ್ಕೃತಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಖಾತೆ ಸಚಿವೆ ಶ್ರೀಮತಿ ಉಮಾಶ್ರೀ, ಹಿರಿಯ ಕಲಾವಿದ, ನಿರ್ದೇಶಕ ಹಾಗೂ ನಿರ್ಮಾಪಕ ವಿ. ರವಿಚಂದ್ರನ್, ಹಿರಿಯ ಸಂಗೀತ ನಿರ್ದೇಶಕ ಹಂಸಲೇಖ, ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ ಅಧ್ಯಕ್ಷ ಸಾ.ರಾ. ಗೋವಿಂದು, ಹಿರಿಯ ಚಲನಚಿತ್ರ ನಿರ್ಮಾಪಕ ರಾಕ್‌ಲೈನ್ ವೆಂಕಟೇಶ್, ರಾಜ್ಯ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ನಿರ್ದೇಶಕ ಎನ್. ಆರ್. ವಿಶುಕುಮಾರ್ ಅವರು ಪಾಲ್ಗೊಳ್ಳಲಿದ್ದಾರೆ ಎಂದು ಅವರು ತಿಳಿಸಿದ್ದಾರೆ.**

**ಹೆಚ್‌ಬಿಡಿ:ಬಾಬು:ಜಿಪಿಆರ್.**

## ಪಟಾಕಿ : ಮುನ್ನೆಚ್ಚರಿಕೆ ಕ್ರಮ

**ಬೆಂಗಳೂರು, ನವೆಂಬರ್ 11 (ಕರ್ನಾಟಕ ವಾರ್ತೆ)**

2015 ನೇ ಸಾಲಿನಲ್ಲಿ ದೀಪಾವಳಿ ಹಬ್ಬವನ್ನು ಸುರಕ್ಷಿತವಾಗಿ ಆಚರಿಸುವ ದಿಸೆಯಲ್ಲಿ ಕರ್ನಾಟಕ ರಾಜ್ಯ ಅಗ್ನಿಶಾಮಕ ಮತ್ತು ತುರ್ತು ಸೇವಾ ಇಲಾಖೆಯು ಈ ಕೆಳ ತೋರಿಸಿರುವ ಕ್ರಮಗಳನ್ನು ಸೂಚಿಸಿರುತ್ತದೆ.

ಅ) ಮಕ್ಕಳಿಗೆ ದೊಡ್ಡವರ ಸಮ್ಮುಖದಲ್ಲೆ ಪಟಾಕಿ ಹಚ್ಚಲು ತಿಳಿಸತಕ್ಕದ್ದು.

ಆ) ತೆರೆದ ಪ್ರದೇಶದಲ್ಲಿ ಪಟಾಕಿ ಹಚ್ಚುವುದು ಸುರಕ್ಷಿತ. ಯಾವುದೇ ಸಂದರ್ಭದಲ್ಲಿ ಮನೆಯೊಳಗೆ ಪಟಾಕಿ ಹಚ್ಚಬಾರದು.

ಇ) ಆದಷ್ಟು ಮಟ್ಟಿಗೆ ಶರೀರಕ್ಕೆ ಹೊಂದಿಕೊಳ್ಳುವಂತಹ ಬಟ್ಟೆಗಳನ್ನು ಧರಿಸತಕ್ಕದ್ದು. ದೊಗಲೆ ಬಟ್ಟೆಗಳನ್ನು ಧರಿಸಬಾರದು.

ಈ) ಸುರ ಸುರ ಬತ್ತಿ ಇತ್ಯಾದಿಗಳನ್ನು ಶರೀರದಿಂದ ಆದಷ್ಟು ದೂರ ಹಿಡಿಯಬೇಕು.

ಉ) ಪಟಾಕಿ ಹಚ್ಚುವಾಗ ಅದರ ಮೇಲೆ ಬಾಗಬಾರದು. ಸಾಧ್ಯವಾದಷ್ಟು ಮಟ್ಟಿಗೆ ಪಕ್ಕದಿಂದ ಹಚ್ಚತಕ್ಕದ್ದು.

ಊ) ಯಾವುದೇ ಪಾತ್ರೆ ಒಳಗೆ ಅಥವಾ ಇಕ್ಕಟ್ಟಾದ ಸ್ಥಳಗಳಲ್ಲಿ ಪಟಾಕಿ ಹಚ್ಚಬಾರದು.

ಋ) ಪಟಾಕಿಗಳನ್ನು ಜೇಬಿನಲ್ಲಿಡಬಾರದು.

ೠ) ಯಾವುದೇ ಸಂದರ್ಭದಲ್ಲಿ ಪಟಾಕಿಗಳನ್ನು ಬೆಂಕಿಯ ಅಥವಾ ಉಷ್ಣತೆ ಹೆಚ್ಚಿರುವ ಸ್ಥಳಗಳಲ್ಲಿ ಇಡಬಾರದು ಹಾಗೂ ಪೊಟ್ಟಣಗಳನ್ನು ತೆರೆಯಬಾರದು.

ಎ) ಹಚ್ಚಿರುವ ಪಟಾಕಿ ಸಿಡಿಯದಿದ್ದರೆ ಅದನ್ನು ಪುನರ್ ಪರೀಕ್ಷಿಸಲು ಪ್ರಯತ್ನಿಸಬಾರದು.

ಏ) ಹೂ ಕುಂಡಗಳನ್ನು ಕೈಯಲ್ಲಿ ಹಿಡಿದುಕೊಂಡು ಹಚ್ಚಬಾರದು.

ಐ) ರಾಕೆಟ್‌ಗಳನ್ನು ಬಳಸುವುದನ್ನು ಪೂರ್ಣವಾಗಿ ತಪ್ಪಿಸುವುದು ಉತ್ತಮ.

ಒ) ಬೇರೆಯವರಿಗೆ ತೋರಿಸಿಕೊಳ್ಳಲು ಪಟಾಕಿ ಹಚ್ಚುವಾಗ ಅಪಾಯಕ್ಕೆ ಅವಕಾಶ ಕೊಡಬಾರದು.

ಓ) ಪಟಾಕಿ ಹಚ್ಚುವಾಗ ಯಾವಾಗಲೂ ಪಕ್ಕದಲ್ಲಿ ನೀರನ್ನು ಇಟ್ಟುಕೊಳ್ಳುವುದು ಸುರಕ್ಷಿತ. ಆಕಸ್ಮಿಕವಾಗಿ ಸುಟ್ಟ ಗಾಯಗಳಾದರೆ ಕೂಡಲೇ ತಣ್ಣೀರನ್ನು ಸುರಿಯತಕ್ಕದ್ದು.

ಔ) ಸಾಧ್ಯವಾದಷ್ಟು ಮಟ್ಟಿಗೆ ಸ್ನೇಹಿತರ ಜೊತೆ ಸೇರಿ ಸಾರ್ವಜನಿಕ ತೆರೆದ ಪ್ರದೇಶಗಳಲ್ಲಿ ಪಟಾಕಿ ಹಚ್ಚುವುದು ಸೂಕ್ತ ಇದರಿಂದ ಎಲ್ಲರೂ ಸಂತೋಷ ಪಡಬಹುದು ಹಾಗೂ ಸುರಕ್ಷಿತ.

ಅಂ) ಪಟಾಕಿ ಹಚ್ಚುವಾಗ ಮಕ್ಕಳು, ವಯಸ್ಸಾದವರು, ಖಾಯಿಲೆ ಇರುವವರು ಹಾಗೂ ಪ್ರಾಣಿಗಳನ್ನು ಗಮನಿಸಿ, ಅವರಿಗೆ ಆಗುವ ತೊಂದರೆಗಳನ್ನು ತಪ್ಪಿಸಲು ಪ್ರಯತ್ನಿಸಿ. ಸಾಧ್ಯವಾದಷ್ಟು ಮಟ್ಟಿಗೆ ಹೆಚ್ಚು ಶಬ್ಧ ಬರುವ ಪಟಾಕಿಗಳನ್ನು ಆಸ್ಪತ್ರೆ ಮತ್ತು ಇತರೆ ಸೂಕ್ಷ್ಮ ಪ್ರದೇಶಗಳಲ್ಲಿ ಬಳಸುವುದನ್ನು ತಪ್ಪಿಸಿ.

ಅಃ) ಯಾವುದೇ ರೀತಿಯ ಅಗ್ನಿಅನಾಹುತಗಳು ಸಂಭವಿಸಿದಲ್ಲಿ ಅಗ್ನಿಶಾಮಕ ಇಲಾಖೆಯ ಕಂಟ್ರೋಲ್ ರೂಂ ದೂರವಾಣಿ ಸಂಖ್ಯೆ 101 ಹಾಗೂ ಬೆಂಗಳೂರು ನಗರದಲ್ಲಿ ಸಂಭವಿಸಿದಲ್ಲಿ ದೂರವಾಣಿ ಸಂಖ್ಯೆ 101 ಅಥವಾ 080–22971500 ಅಥವಾ 080–22971600 ಸಂಖ್ಯೆಗೆ ಕರೆ ಮಾಡಿ ಮಾಹಿತಿ ನೀಡಲು ಸಾರ್ವಜನಿಕರಲ್ಲಿ ಕೋರಿದೆ.

**ಬಾಬು:ಜಿಪಿಆರ್.**

# **FIRE CRACKERS : AWARENESS**

Bengaluru, November 11 (Karnataka Information)

To ensure an accident free **Deepavali festival-2015** Karnataka State Fire & Emergency Service department suggest following safety measures.

a) Allow the children to light fireworks only under the supervision of adult members.

b) Do not light fire crackers inside the house but light them in an open space away from combustible materials.

c) Never wear loose, flowing clothes while lighting fireworks.

d) Hold sparklers away from the body.

e) Never bend over the fireworks while lighting them Light them from the side.

f) Never light fireworks under confinement in a metal container.

g) Never keep fire crackers in the pocket.

h) Never store fireworks or unpack them near a flame or source of heat.

i) Never return to fire work once lit - it may explode on your face.

j) Never light a flowerpot holding it.

k) While lighting rocket like crackers, take precaution that it does not enter into an open window, door, open building, hut etc. As far as possible avoid lighting of rockets.

l) Never take unnecessary risk while lighting fireworks just to show off to your friends.

m) Keep a bucket of water handy while lighting fireworks and in case of any burn or injury immediately pour clean water.

n) Get all your friend together and pool in your fireworks. Light them in an open space. Have some adult to supervise the display. This way you will be able to enjoy many more or types of fireworks and it will also be safer and cheaper.

o) Show concern for infants, the aged, sick & animals. Do not light loud fireworks near them or near Hospitals.

p) In case of any fire accidents public are requested to inform fire control room i.e. phone no. 101 and in case of Bangalore city apart from 101 phone Nos. 080-22971500 or 080-22971600 can be contacted.

ಬಾಬು:ಜಿಪಿಆರ್.